**ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾ.ದಂಃ ರವರ ನ್ಯಾಯಾಲಯ, ಮೂಡಿಗೆರೆ**
**ಸಿ.ಸಿ.462/2024**

| | | |
|---|---|---|
| ಸಾಕ್ಷಿದಾರರ ಹೆಸರು | : ಇಕ್ಲಾಸ್ ಅಹಮ್ಮದ್ | ಪ್ರಾಸಾ-9 |
| ತಂದೆಯ ಹೆಸರು | : ಲೇಟ್ ಎಸ್.ಎ. ಕುದ್ದೂಸ್ | ಚಾಸಾ-14 |
| ವಯಸ್ಸು | : 43 ವರ್ಷ | ಪ್ರಮಾಣ ವಚನ ಬೋಧಿಸಲಾದ |
| ಉದ್ಯೋಗ | : ವೈಧ್ಯಾಧಿಕಾರಿ | ದಿನಾಂಕಃ 24.06.2025. |
| ವಾಸಸ್ಥಳ | : ಬಣಕಲ್ | |

**:ಮುಖ್ಯ ವಿಚಾರಣೆಃ ಪ್ರಾಙ್ಞ್ಯಾಸ.ಸ.ಅ. ರವರಿಂದ:**

ನಾನು ಕಳೆದ 19 ವರ್ಷದಿಂದ ಇಲ್ಲಿಯವರೆಗೂ ಬಣಕಲ್ ಪ್ರಾಥಮಿಕ ಆರೋಗ್ಯ ಕೇಂದರದಲ್ಲಿ ವೈಧ್ಯಾಧಿಕಾರಿ ಆಗಿ ಕರ್ತವ್ಯ ನಿರ್ವಹಿಸಿರುತ್ತೇನೆ.

ದಿ.02.11.2023 ರಂದು ಮ.1.15 ರ ಸಮಯದಲ್ಲಿ ಚಾಸಾ-1 ರವರು ಚಾಸಾ-21 ರವರು ಅದೇ ದಿನ ಬೆಳಗ್ಗೆ 10.50 ರ ಸಮಯದಲ್ಲಿ ಚಾರ್ಮಡಿ ಘಾಟ್ ನ ಬಳಿ ನಡೆದ ಹಲ್ಲೆಯ ಹಿನ್ನಲೆಯಲ್ಲಿ ಆಸ್ಪತ್ರೆಗೆ ಚಿಕಿತ್ಸೆಗಾಗಿ ಕರೆದುಕೊಂಡು ಬಂದಿರುತ್ತಾರೆ. ಚಾಸಾ-1 ರವರನ್ನು ಪರೀಕ್ಷೆಗೆ ಒಳಪಡಿಸಿದಾಗ ಈ ಕೆಳಕಂಡ ಗಾಯಗಳು ಕಂಡುಬಂದಿರುತ್ತದೆ. ಅವುಗಳೆಂದರೆ ಎಡ ಭಾಗದ ಕೆನ್ನೆ ಮತ್ತು ಮೂಗಿನ ಮೇಲೆ ನೋವುಂಟಾಗಿರುವುದು ಕಂಡುಬಂದಿರುತ್ತದೆ. ನನ್ನ ಅಭಿಪ್ರಾಯದ ಪ್ರಕಾರ ಸದರಿ ಗಾಯವು ಸಾಮಾನ್ಯ ಸ್ವರೂಪದ ಗಾಯಗಳಾಗಿರುತ್ತವೆ. ಸದರಿ ವರದಿಯನ್ನು ಸಾಕ್ಷಿಯು ನೋಡಿ ಗುರುತಿಸಿದ್ದು, ಅದನ್ನು ನಿಪಿ-11, ಅದರಲ್ಲಿರುವ ಸಾಕ್ಷಿಯು ಸಹಿಯನ್ನು ನಿಪಿ-11(ಎ) ಎಂದು ಗುರುತಿಸಲಾಯಿತು. ಸದರಿ ವರದಿಯನ್ನು ದಿ.14.12.2023 ರಂದು ನೀಡಿರುತ್ತೇನೆ. ನಾನು ಮೇಲೆ ತಿಳಿಸಿದ ಗಾಯಗಳು ಎಂ.ಒ.2 ರಿಂದ ಹಲ್ಲೆ ಮಾಡಿದರೂ ಸಂಭವಿಸುವ ಸಾಧ್ಯತೆ ಇರುತ್ತದೆ.

**ಪಾಟೀ ಸವಾಲುಃ ಆರೋಪಿ ಪರ ಶ್ರೀ ಹೆಚ್.ಎಸ್.ಆರ್. ವಕೀಲರಿಂದಃ**

ನಿಪಿ-11 ರಲ್ಲಿ ಚಿಕಿತ್ಸೆಯನ್ನು ಎಷ್ಟು ಗಂಟೆ ಕಾಲ ನೀಡಲಾಗಿರುತ್ತದೆ ಎಂಬುದರ ಕುರಿತು ನಮೂದಿಸಿರುವುದಿಲ್ಲ ಎಂದರೆ ಸರಿ. ನಮ್ಮ ಆಸ್ಪತ್ರೆಯಲ್ಲಿ ಗಾಯ ಪ್ರಮಾಣ ಪ್ರತಿಯೂ ಹಾಲಿ ಇರುತ್ತದೆ ಎಂದರೆ ಸರಿ. ಸದರಿ ಪ್ರಮಾಣ ಪತ್ರದಲ್ಲಿ ಯಾವ ವ್ಯಕ್ತಿಯಿಂದ ಹಲ್ಲೆ ಮಾಡಲಾಗಿರುತ್ತದ ಎಂಬುದರ ಕುರಿತು ನಮೂದಿಸಿರುವುದಿಲ್ಲ ಎಂದರೆ ಸರಿ. ದಿ.02.11.2023 ರಂದು ಚಾಸಾ-21 ರವರು ಯಾವುದೇ ವ್ಯಕ್ತಿಯನ್ನು ಹಲ್ಲೆಯ ಹಿನ್ನಲೆಯಲ್ಲಿ ನಮ್ಮ ಆಸ್ಪತ್ರೆಗೆ ಕರೆದುಕೊಂಡು ಬಂದಿರುವುದಿಲ್ಲ ಎಂದರೆ ಸರಿಯಲ್ಲ. ಚಾಸಾ-1 ರವರಿಗೆ ನಾನು ನೀಡಿದ ವರದಿಯಂತೆ ಯಾವುದೇ ರೀತಿಯ ಗಾಯಗಳು ಸಂಭವಿಸಿಲ್ಲ ಎಂದರೆ ಸರಿಯಲ್ಲ. ನಿಪಿ-11 ನ್ನು ಪೋಲಿಸರೊಂದಿಗೆ ಶಾಮೀಲಾಗಿ ಸೃಷ್ಟಿಸಲಾಗಿದೆ ಎಂದರೆ ಸರಿಯಲ್ಲ. ಈ ಪ್ರಕರಣಕ್ಕೆ ಕುರಿತು ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**<u>ಮರು ವಿಚಾರಣೆ ಇಲ್ಲ</u>**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಿ ಮುದ್ರಿಸಲಾಯಿತು)

ಓ ಹೇ ಕೇ ಸ ಇ ಎ ಒ.,

ಸಹಿ/-

ಸಾಕ್ಷಿ ಸಹಿಃ

ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು
ಮತ್ತು ಪ್ರದನ್ಯಾದಂ., ಮೂಡಿಗೆರೆ.

**ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾ.ದಂಃ ರವರ ನ್ಯಾಯಾಲಯ, ಮೂಡಿಗೆರೆ**
**ಸಿ.ಸಿ.462/2024**

| | | |
|---|---|---|
| ಸಾಕ್ಷಿದಾರರ ಹೆಸರು | : ಶಿವರಾಮ್ ನಾಯಕ್ | ಪ್ರಾಸಾ-10 |
| ತಂದೆಯ ಹೆಸರು | : ವಾಮನ ನಾಯಕ್ | ಚಾಸಾ-15 |
| ವಯಸ್ಸು | : 58 ವರ್ಷ | ಪ್ರಮಾಣ ವಚನ ಬೋಧಿಸಲಾದ |
| ಉದ್ಯೋಗ | : ಡಿಪೋ ಮ್ಯಾನೇಜರ್ | ದಿನಾಂಕಃ 24.06.2025. |
| ವಾಸಸ್ಥಳ | : ಮಂಗಳೂರು | |

**:ಮುಖ್ಯ ವಿಚಾರಣೆಃ ಪ್ರಾಜ್ಞ್ಯಾಸ.ಸ.ಅ. ರವರಿಂದ:**

ನಾನು 2021 ರಿಂದ 2024 ರವರೆಗೆ ಉಡುಪಿಯ ಕೆ.ಎಸ್.ಆರ್.ಟಿ.ಸಿ ಯಲ್ಲಿ ಡಿಪೋ ಮ್ಯಾನೇಜರ್ ಆಗಿ ಕರ್ತವ್ಯ ನಿರ್ವಹಿಸಿರುತ್ತೇನೆ.

ದಿ.02.11.2023 ರಂದು ಬಣಕಲ್ ಪೋಲಿಸ್ ಠಾಣೆಯಿಂದ ಚಾಸಾ-1 ಮತ್ತು 2 ರವರ ಕರ್ತವ್ಯದ ದೃಢೀಕರ ವರದಿಯನ್ನು ಕೋರಿರುತ್ತಾರೆ. ಸದರಿ ವರದಿಯನ್ನು ನಾನು ದಿ.05.11.2024 ರಂದು ನೀಡಿರುತ್ತೇನೆ. ಸದರಿ ವರದಿಯೊಂದಿಗೆ ವಾಹನದ ನಿವೇದನಾ ಪತ್ರ ಮತ್ತು ನಿರ್ವಾಹಕರಿಗೆ ಸಂಬಂಧಪಟ್ಟಂಟೆ ಮಾರ್ಗ ಪತ್ರವನ್ನು ಲಗತ್ತಿಸಿರುತ್ತೇನೆ.

ಸದರಿ ದೃಢೀಕರಣ ಪತ್ರವನ್ನು ಸಾಕ್ಷಿಯು ನೋಡಿ ಗುರುತಿಸಿದ್ದು, ಅದನ್ನು ನಿಪಿ-12 ಎಂದು ಗುರುತಿಸಲಾಯಿತು. ಅದರಲ್ಲಿರುವ ಸಾಕ್ಷಿಯ ಸಹಿಯನ್ನು ನಿಪಿ-12(ಎ) ಎಂದು ಗುರುತಿಸಲಾಯಿತು.

**ಪಾಟೀ ಸವಾಲುಃ ಆರೋಪಿ ಪರ ಶ್ರೀ ಹೆಚ್.ಎಸ್.ಆರ್. ವಕೀಲರಿಂದಃ**

ದಿ.02.11.2023 ರಂದು KA-19-F-3360 ಬಸ್ ಉಡುಪಿ, ಚಿಕ್ಕಮಗಳೂರು ಮಾರ್ಗವಾಗಿ ಸಂಚರಿಸಿರುವುದಿಲ್ಲ ಎಂದರೆ ಸರಿ. ಸದರಿ ದಿನ ಚಾಸಾ-1 ಮತ್ತು 2 ರವರು ಸದರಿ ಬಸ್ ನಲ್ಲಿ ಸಂಚರಿಸಿರುವುದಿಲ್ಲ ಎಂದರೆ ಸರಿಯಲ್ಲ. ನಿಪಿ-12 ನ್ನು ಪ್ರಸ್ತುತ ಪ್ರಕರಣಕ್ಕಾಗಿ ಸೃಷ್ಟಿಸಲಾಗಿದೆ ಎಂದರೆ ಸರಿಯಲ್ಲ. ಪ್ರಸ್ತುತ ಪ್ರಕರಣದ ಬಗ್ಗೆ ಯಾವುದೇ ಮಾಹಿತಿ ಇರದಿದ್ದರೂ ಚಾಸಾ-1 ಮತ್ತು 2 ರವರು ನಮ್ಮ ಇಲಾಖೆಯ ಸಿಬ್ಬಂಧಿಯಾಗಿದ ಕಾರಣ ಅವರಿಗೆ ಸಹಾಯ ಮಾಡುವ ಉದ್ದೇಶದಿಂದ ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**ಮರು ವಿಚಾರಣೆ ಇಲ್ಲ**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಿ ಮುದ್ರಿಸಲಾಯಿತು)

ಓ ಹೇ ಕೇ ಸ ಇ ಎ ಒ.,
ಸಹಿ/-

ಸಾಕ್ಷಿ ಸಹಿಃ

ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು
ಮತ್ತು ಪ್ರದನ್ಯಾದಂ., ಮೂಡಿಗೆರೆ.